ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 18–11–2018

# ಪತ್ರಿಕಾ ಪ್ರಕಟಣೆ

## ಬೆಂಗಳೂರು ನಗರ ಜಿಲ್ಲೆಯಾದ್ಯಂತ ನೈರ್ಮಲ್ಯ ಹಾಗೂ ಸ್ವಚ್ಛತಾ ಕಾರ್ಯಕ್ರಮ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ನವೆಂಬರ್ 19 ರಂದು "ವಿಶ್ವ ಶೌಚಾಲಯ ದಿನ" ದ ಅಂಗವಾಗಿ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಅವರು ಜಿಲ್ಲಾ ತಾಲ್ಲೂಕು ಮತ್ತು ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಆಂದೋಲನ ರೂಪದಲ್ಲಿ ನೈರ್ಮಲ್ಯ ಹಾಗೂ ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಸಾರ್ವಜನಿಕರಿಗೆ ಶೌಚಾಲಯ ಬಳಕೆ, ವೈಯಕ್ತಿಕ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವ ಜೊತೆಗೆ ರಸ್ತೆಗಳು ಚರಂಡಿಗಳು, ಸಾರ್ವಜನಿಕ ಸ್ಥಳಗಳು, ಧಾರ್ಮಿಕ ಸ್ಥಳಗಳು ಮತ್ತು ಸರ್ಕಾರಿ ಕಚೇರಿಗಳಲ್ಲಿ ಸ್ವಚ್ಛ ಮಾಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳ ಎಲ್ಲಾ ಗ್ರಾಮಗಳಲ್ಲಿ ಫಲಾನುಭವಿಗಳು ವೈಯಕ್ತಿಕ ಗೃಹ ಶೌಚಾಲಯಗಳನ್ನು ನಿರ್ಮಾಣ ಮಾಡಿಕೊಂಡಿರುವ ಹಿನ್ನೆಲೆಯಲ್ಲಿ 2016 ರಲ್ಲಿ ಬಯಲು ಬಹಿರ್ದೆಸೆ ಮುಕ್ತ ಜಿಲ್ಲೆ ಎಂದು ಸ್ವಚ್ಛ ಭಾರತ ಮಿಷನ್ ಅವರಿಂದ ಘೋಷಿಸಲ್ಪಟ್ಟಿತ್ತು.

ಜಿಲ್ಲಾಮಟ್ಟದ ಕಾರ್ಯಕ್ರಮಕ್ಕೆ ನವೆಂಬರ್ 19 ರಂದು ವಿಧಾನಸೌಧ ಹಾಗೂ ವಿಕಾಸಸೌಧದ ಮಧ್ಯಭಾಗದಲ್ಲಿರುವ ಮಹಾತ್ಮ ಗಾಂಧೀಜಿ ಪ್ರತಿಮೆಯ ಬಳಿ ಗ್ರಾಮೀಣ ಕುಡಿಯುವ ನೀರು ಸರಬರಾಜು ನೈರ್ಮಲ್ಯ ಇಲಾಖೆಯ ಆಯುಕ್ತರು ಚಾಲನೆ ನೀಡಲಿದ್ದಾರೆ.

ಅದೇ ರೀತಿ ತಾಲ್ಲೂಕು ಹಂತದ ಕಾರ್ಯಕ್ರಮವನ್ನು ಆನೇಕಲ್ ತಾಲ್ಲೂಕಿನ ಇಂಡ್ಲವಾಡಿ ಗ್ರಾಮ ಪಂಚಾಯಿತಿಯಲ್ಲಿ, ಬೆಂಗಳೂರು ಉತ್ತರ ತಾಲ್ಲೂಕಿನ ಚಿಕ್ಕಬಿದರಕಲ್ಲು ಗ್ರಾಮ ಪಂಚಾಯಿತಿಯಲ್ಲಿ, ಬೆಂಗಳೂರು ದಕ್ಷಿಣ ತಾಲ್ಲೂಕಿನ ಕಗ್ಗಲೀಪುರ ಗ್ರಾಮ ಪಂಚಾಯಿತಿಯಲ್ಲಿ ಹಾಗೂ ಬೆಂಗಳೂರು ಪೂರ್ವ ತಾಲ್ಲೂಕಿನ ದೊಡ್ಡಬನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಆಯೋಜಿಸಲಾಗಿದೆ. ಹಾಗೂ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ವಿಶ್ವ ಶೌಚಾಲಯ ದಿನಾಚರಣೆ – 2018ರ ಕಾರ್ಯಕ್ರಮವನ್ನು

ಹಮ್ಮಿಕೊಳ್ಳಲಾಗುತ್ತದೆ. ಸಾರ್ವಜನಿಕರು ಹೆಚ್ಚಿನ ರೀತಿಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಯಾಗಿಸುವಂತೆ ನಗರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಎಂ.ಎಸ್.ಅರ್ಚನಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಮ್ಮ ರೈತ ಮತ್ತೊಬ್ಬರಿಗೆ ಹಣ ನೀಡುವಂತಾಗಬೇಕು ಎಂಬುದು ಸರ್ಕಾರದ ಉದ್ದೇಶ

– ಹೆಚ್.ಡಿ.ಕುಮಾರಸ್ವಾಮಿ

ನಮ್ಮ ರೈತ ಇನ್ನೊಬ್ಬರ ಮುಂದೆ ಹಣಕ್ಕಾಗಿ ಕೈಚಾಚದೆ ಮತ್ತೊಬ್ಬರಿಗೆ ಹಣದ ನೆರವು ನೀಡುವಂತೆ ಆತನ ಆರ್ಥಿಕ ಶಕ್ತಿಯನ್ನು ಹೆಚ್ಚಿಸಬೇಕೆಂಬುದು ನಮ್ಮ ಸರ್ಕಾರದ ಉದ್ದೇಶವಾಗಿದೆ ಎಂದು ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ತಿಳಿಸಿದರು.

ಇಂದು ಕೃಷಿ ವಿಶ್ವವಿದ್ಯಾನಿಲಯದಲ್ಲಿ ಏರ್ಪಡಿಸಲಾಗಿದ್ದ ಕೃಷಿ ಮೇಳ – 2018 ರ ಸಮಾರೋಪ ಸಮಾರಂಭದಲ್ಲಿ ಕೃಷಿಯಲ್ಲಿ ಸಾಧನೆ ಮಾಡಿದ ರೈತರಿಗೆ ರಾಜ್ಯಮಟ್ಟದ ಅತ್ಯುತ್ತಮ ರೈತ ಪ್ರಶಸ್ತಿಯನ್ನು ಪ್ರದಾನ ಮಾಡಿ ಮಾತನಾಡಿದ ಅವರು ಹಳೆಯ ಕೃಷಿ ಪದ್ಧತಿಯನ್ನು ಮುಂದುವರೆಸುತ್ತಿರುವುದರಿಂದ ಇಂದು ರೈತನ ಬದುಕು ನಶಿಸಿ ಹೋಗುತ್ತಿದೆ. ಆಧುನಿಕ ತಂತ್ರಜ್ಞಾನದ ಬಳಕೆಯನ್ನು ಕೃಷಿಯಲ್ಲಿ ಅಳವಡಿಸುವ ಮೂಲಕ ರೈತರನ್ನು ಆರ್ಥಿಕವಾಗಿ ಸದೃಢರನ್ನಾಗಿಸಬೇಕೆಂಬುದೇ ನಮ್ಮ ಮೈತ್ರಿ ಸರ್ಕಾರದ ಆಶಯವಾಗಿದೆ ಎಂದರು.

ರೈತರ ಬದುಕನ್ನು ಕತ್ತಲೆಯಿಂದ ಬೆಳಕಿನೆಡೆಗೆ ಕೊಂಡೊಯ್ಯುವ ಉದ್ದೇಶದಿಂದ ಮತ್ತು ರೈತರು ಹಣಕ್ಕಾಗಿ ಖಾಸಗಿ ವ್ಯಕ್ತಿಗಳಿಂದ ಸಾಲ ಪಡೆಯದಂತೆ ಮಾಡಲು ಸರ್ಕಾರದಿಂದಲೇ ರೈತರಿಗೆ ಎಲ್ಲಾ ಸವಲತ್ತುಗಳನ್ನು ನೀಡುವಂತೆ ಮಾಡಲು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ಇಂದು ಕೃಷಿಕರ ಬದುಕು ಅತ್ಯಂತ ದುಸ್ಥರವಾಗಿರುವ ಬಗ್ಗೆ ದೇಶದಾದ್ಯಂತ ದೊಡ್ಡ ಮಟ್ಟದಲ್ಲಿ ಚರ್ಚೆಯಾಗುತ್ತಿದೆ. ಅದೇ ರೀತಿ ಇವತ್ತು ನಮಗೆ ಹಲವಾರು ಸವಾಲುಗಳಿವೆ. ಕೃಷಿಯನ್ನು ನಂಬಿ ಬದುಕುತ್ತಿರುವ ಕೃಷಿಕರು ಸಂಕಷ್ಟವನ್ನು ಎದುರಿಸುತ್ತಿದ್ದಾನೆ. ಹಲವಾರು ಭಾಗಗಳಲ್ಲಿ ಮಳೆಯ ಕೊರತೆಯಿಂದ ಬಿತ್ತನೆ ಮಾಡಿದ ಬೆಳೆಗಳೆಲ್ಲಾ ನಾಶವಾಗುತ್ತಿದೆ. ಹಾಗಾಗಿ ಮೈತ್ರಿ ಸರ್ಕಾರ ಸಂಕಷ್ಟದಲ್ಲಿರುವ ರೈತರನ್ನು ಪಾರು ಮಾಡುವ ಸಲುವಾಗಿಯೇ 45 ಸಾವಿರ ಕೋಟಿ ರೂ. ಸಾಲ ಮನ್ನಾ ಮಾಡಲು ಮುಂದಾಗಿದೆ. ಇದಕ್ಕಾಗಿಯೇ ಐ.ಎ.ಎಸ್. ಅಧಿಕಾರಿಯೊಬ್ಬರನ್ನು ನಿಯೋಜನೆ ಮಾಡಲಾಗಿದ್ದು, ಜೂನ್ ತಿಂಗಳೊಳಗೆ ರೈತರ ಸಾಲ ಮನ್ನಾ ಮಾಡಲಾಗುವುದು. ನಮ್ಮ ಸರ್ಕಾರ ರೈತ ಪರ ಸರ್ಕಾರವಾಗಿದೆ. ಹಾಗಾಗಿ ಯಾವುದೇ ಅಪ ಪ್ರಚಾರಗಳಿಗೆ ರೈತರು ಕಿವಿಕೊಡದೆ ಸರ್ಕಾರದ ಮೇಲೆ ವಿಶ್ವಾಸವನ್ನು ಇರಿಸುವಂತೆ ರೈತರಲ್ಲಿ ಮನವಿ ಮಾಡಿದರು.

ಸಾಲ ಮನ್ನಾ ಮಾಡುತ್ತಿರುವುದರಿಂದ ರೈತರ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಿದಂತಾಗುವುದಿಲ್ಲ. ಅದು ಕೇವಲ ತಾತ್ಕಾಲಿಕ ಪರಿಹಾರವಷ್ಟೆ. ಯಾವುದೇ ಖಾಸಗಿಯವರಿಂದ ಹಣ ಪಡೆದುಕೊಳ್ಳದಂತೆ ಮಾಡಲು ಸರ್ಕಾರವೇ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಮುಂದೆ ಒಗಿಸಲಾಗುವುದೆಂದು ಮುಖ್ಯಮಂತ್ರಿಗಳು ರೈತರಿಗೆ ಭರವಸೆ ನೀಡಿದರು.

ಇಂದು ರೈತರು ಬೆಳಗಾವಿಯ ಸುವರ್ಣಸೌಧದ ಗೇಟಿನ ಬೀಗವನ್ನು ಮುರಿದು ನನ್ನ ವಿರುದ್ಧ ಪ್ರತಿಭಟನೆ ಮಾಡುತ್ತಿರುವುದಾಗಿ ವಿದ್ಯುನ್ಮಾನ ಮಾಧ್ಯಮಗಳಲ್ಲಿ ತೋರಿಸಲಾಗುತ್ತಿತ್ತು. ಆದರೆ ಪ್ರತಿಭಟನೆ ಮಾಡುತ್ತಿದ್ದವರು ನಿಜವಾದ ರೈತರಲ್ಲ. ನಾನು ಅಧಿಕಾರಕ್ಕೆ ಬಂದು 5 $^1/_2$ ತಿಂಗಳಾಗುತ್ತಿದೆ. ಆದರೆ ಅವರು 4 ವರ್ಷದ ಹಿಂದೆ ಸಕ್ಕರೆ ಕಾರ್ಖಾನೆ ಮಾಲೀಕರು ಬೆಂಬಲ ಬೆಲೆ ನೀಡಿಲ್ಲದಿರುವುದಕ್ಕೆ ಪ್ರತಿಭಟನೆ ಮಾಡುತ್ತಿದ್ದಾರೆ. ಅದಕ್ಕೆ ನಾನು ಹೇಗೆ ಹೊಣೆಯಾಗುತ್ತೇನೆ. ಆದರೂ ಕೂಡ ನಾನು ಇತ್ತೀಚೆಗೆ ಸಕ್ಕರೆ ಕಾರ್ಖಾನೆಗಳ ಮಾಲೀಕರೊಂದಿಗೆ ರೈತರ ಸಮಸ್ಯೆ ಪರಿಹರಿಸಲು ಚರ್ಚೆ ನಡೆಸಿದ್ದೇನೆ. ಮಾಧ್ಯಮ ಮಿತ್ರರು ಜನರಲ್ಲಿ ಸಂಶಯ ಬೀಜ ಬಿತ್ತಬೇಡಿ. ಅವರಿಗೆ ಪ್ರೋತ್ಸಾಹ ನೀಡುವಂತಹ ಸುದ್ದಿಗಳನ್ನು ಬಿತ್ತರಿಸುವಂತೆ ಮಾಧ್ಯಮದವರಿಗೆ ಮನವಿ ಮಾಡಿದರು.

ಕೃಷಿ ಸಚಿವರಾದ ಎನ್.ಹೆಚ್.ಶಿವಶಂಕರರೆಡ್ಡಿ ಅವರು ಮಾತನಾಡಿ, ಈ ಕೃಷಿಮೇಳದಲ್ಲಿ ಅನೇಕ ಆವಿಷ್ಕಾರಗಳನ್ನು ಸರ್ಕಾರ ಮಾಡಿದ್ದು, ಕೃಷಿಯಲ್ಲಿ ಬದಲಾವಣೆ ತರುವ ಉದ್ದೇಶದಿಂದ ಹೊಸ ತಳಿಗಳು ಯಂತ್ರೋಪಕರಣಗಳು ಮತ್ತು ಕೃಷಿ ಪದ್ಧತಿಯಲ್ಲಿ ಸಂಶೋಧನೆಯನ್ನು ನಡೆಸಲಾಗಿದೆ. ಇಸ್ರೇಲ್ ಮಾದರಿಯ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳಲು ಎಲ್ಲಾ ತಯಾರಿ ನಡೆಸಲಾಗುತ್ತಿದೆ. ಕೃಷಿ ಆದಾಯವನ್ನು ಹೆಚ್ಚು ಮಾಡುವ ನಿಟ್ಟಿನಲ್ಲಿ ಶೂನ್ಯ ಬಂಡವಾಳ ಕೃಷಿಯನ್ನು ಮಾಡಬೇಕೆಂದು ನಮ್ಮ ಸರ್ಕಾರ ಉದ್ದೇಶಿಸಿದೆ. ಹಾಗೆಯೇ ತೆಲಂಗಾಣ ಮಾದರಿಯಲ್ಲಿ ರೈತರಿಗೆ ವಿಮಾ ಪಾಲಿಸಿಯನ್ನು ಮಾಡುವ ಬಗ್ಗೆ ಕೂಡ ಸರ್ಕಾರ ಆಲೋಚನೆ ನಡೆಸಿದೆ ಎಂದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಚಿವ ಕೃಷ್ಣಬೈರೇಗೌಡ ಅವರು ಮಾತನಾಡಿ, ಪದೇ ಪದೇ ಬರಗಾಲದ ಪರಿಸ್ಥಿತಿಯನ್ನು ನಮ್ಮ ರಾಜ್ಯ ಎದುರಿಸ್ತುತ್ತಿದೆ. ರೈತರು ಬೆಳೆದಂತಹ ಬೆಳೆಗಳಿಗೆ ಲಾಭದಾಯಕ ಬೆಲೆ ಸಿಗುವಂತಾಗಬೇಕಿದೆ. ಕೃಷಿ ಲಾಭದಾಯಕವಾಗಬೇಕಿದೆ. ಈ ಎಲ್ಲಾ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಸಿಗಬೇಕಾದರೆ ತಂತ್ರಜ್ಞಾನವನ್ನು ಎಲ್ಲರೂ ಅಳವಡಿಸಿಕೊಂಡಾಗ ಮಾತ್ರ ಕೃಷಿ ಲಾಭದಾಯಕವಾಗಲು ಸಾಧ್ಯ. ಆಗ ರೈತ ನಾಲ್ಕು ಜನರಿಗೆ ಉದ್ಯೋಗ ನೀಡುವಂತಾಗುತ್ತಾನೆ. ಹಾಗಾಗಿ ಕೃಷಿ ಮೇಳದ ಪ್ರಯೋಜನವನ್ನು ರೈತರು ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ವಿವಿಧ ಬೆಳೆಗಳಿಗೆ ಅಂತರ್ಜಾಲ ತಂತ್ರಾಂಶದ ಮೂಲಕ ಮಣ್ಣು ಪರೀಕ್ಷೆ ಮಾಡುವ ಮತ್ತು ಬೀಜ ಆಧಾರ್ ಕುರಿತ ವೆಬ್‌ಸೈಟ್ ಹಾಗೂ ಕಿರು ಹೊತ್ತಿಗೆಗಳನ್ನು ಬಿಡುಗಡೆಗೊಳಿಸಿದರು.

ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಡಾ: ಎಸ್.ರಾಜೇಂದ್ರ ಪ್ರಸಾದ್ ಅವರು ಪ್ರಾಸ್ತಾವಿಕವಾಗಿ ಕೃಷಿ ಮೇಳದ ಸಂಕ್ಷಿಪ್ತ ಪರಿಚಯ ನೀಡಿ ಅತಿಥಿಗಳನ್ನು ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಲೋಕಸಭಾ ಸದಸ್ಯರಾದ ಎಂ.ವೀರಪ್ಪಮೊಯ್ಲಿ, ಕೃಷಿ ವಿಶ್ವವಿದ್ಯಾನಿಲಯದ ವ್ಯವಸ್ಥಾಪನಾ ಮಂಡಳಿ ಸದಸ್ಯರು ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.